**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/10/ಎಲ್ಆರ್‌ಡಿಸಿ/2013 \1823

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 07-06-2013.

: **ಸುತ್ತೋಲೆ** :

ವಿಷಯ: ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಐತಿಹಾಸಿಕ ಕನ್ನಡ ಚಲನಚಿತ್ರವನ್ನು ವೀಕ್ಷಿಸಲು ವಿದ್ಯಾರ್ಥಿಗಳಿಗೆ ಅನುಮತಿ ನೀಡುವ ಬಗ್ಗೆ

ಉಲ್ಲೇಖ: ಸರ್ಕಾರದ ಪತ್ರ ಸಂ. ಇಡಿ/02/ಯುಜಿಹೆಚ್/2013, ದಿ:16/01/2013

* * * *

ನಿರ್ಮಾಪಕರು, ಶ್ರೀ ಸಂಗೊಳ್ಳಿ ರಾಯಣ್ಣ ಸಿನಿ ಕಂಬೈನ್ಸ್, ಬೆಳಗಾವಿ ಇವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಐತಿಹಾಸಿಕ ಚಲನಚಿತ್ರವು ದೇಶಪ್ರೇಮ, ನಾಡು ನುಡಿ ಹಾಗೂ ಸ್ವಾತಂತ್ರ್ಯ ಹೋರಾಟದ ಮನೋಭಾವವನ್ನು ಹೊಂದಿದ ಮಹಾನ್ ವ್ಯಕ್ತಿಯ ಚಿತ್ರವಾಗಿದ್ದು, ಸದರಿ ಚಲನಚಿತ್ರವನ್ನು ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ಪ್ರದರ್ಶನವನ್ನು ಏರ್ಪಡಿಸಲು ಅನುಮತಿ ಕೋರಿದ್ದು, ಅಗತ್ಯ ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಈ ಸಂಬಂಧ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರು, ನಿರ್ಮಾಪಕರು, ಶ್ರೀ ಸಂಗೊಳ್ಳಿ ರಾಯಣ್ಣ ಸಿನಿ ಕಂಬೈನ್ಸ್, ಬೆಳಗಾವಿ ಇವರೊಂದಿಗೆ ಸಹಕರಿಸಿ, ವಿದ್ಯಾರ್ಥಿಗಳಿಗೆ ಚಲನಚಿತ್ರವನ್ನು ರಿಯಾಯಿತಿ ದರದಲ್ಲಿ ವೀಕ್ಷಿಸಲು ಅನುವು ಮಾಡಿಕೊಡುವಂತೆ ಈ ಮೂಲಕ ತಿಳಿಸಲಾಗಿದೆ.

7/6/13
ಜಂಟಿ ನಿರ್ದೇಶಕರು (ಸಿಡಿಸಿ)

**ಇವರಿಗೆ,**

ಎಲ್ಲಾ ಸರ್ಕಾರಿ / ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ.

**ಪ್ರತಿ:**

1. ನಿರ್ಮಾಪಕರು, ಶ್ರೀ ಸಂಗೊಳ್ಳಿ ರಾಯಣ್ಣ ಸಿನಿ ಕಂಬೈನ್ಸ್, ಬೆಳಗಾವಿ ಇವರ ಮಾಹಿತಿಗಾಗಿ.
2. ಇ-ಆಡಳಿತ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.

P-LRDC-Office Note